# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1274 |
| 2 | ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 29-12-2022 |
| 4 | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ಎಷ್ಟು ಕಿಲೋಮೀಟರ್ ರಾಜ ಕಾಲುವೆ ಇದೆ; ಅದರಲ್ಲಿ ಎಷ್ಟು ಕಾಲುವೆಗಳು ಒತ್ತುವರಿಯಾಗಿವೆ; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು 859.90 ಕಿ.ಮೀ ಉದ್ದದ ಪ್ರಥಮ ಹಾಗೂ ದ್ವಿತೀಯ ರಾಜಕಾಲುವೆಗಳು ಇರುತ್ತವೆ. ಸದರಿ ರಾಜಕಾಲುವೆಗಳಲ್ಲಿ ಬೃಹತ್ ನೀರುಗಾಲುವೆಗೆ ಸಂಬಂಧಿಸಿದಂತೆ 2015-16ನೇ ಸಾಲಿನಿಂದ ಇಲ್ಲಿಯವರೆವಿಗೂ ಸರ್ವೆ ಇಲಾಖೆಯಿಂದ ಒಟ್ಟು 2671 ಸಂಖ್ಯೆಯ ರಾಜ ಕಾಲುವೆ ಒತ್ತುವರಿಗಳನ್ನು ಗುರುತಿಸಲಾಗಿರುತ್ತದೆ. |
| ಆ) | ಒತ್ತುವರಿಯಾದ ಕಾಲುವೆಗಳ ತೆರವುಗೊಳಿಸುವುದನ್ನು ಸ್ಥಗಿತಗೊಂಡಿರುವುದು ನಿಜವೆ; ನಿಜವಾದ್ದಲ್ಲಿ, ಯಾವ ಕಾರಣಕ್ಕಾಗಿ ಸ್ಥಗಿತಗೊಳಿಸಲಾಗಿದೆ; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ರಾಜಕಾಲುವೆಗಳ ಒತ್ತುವರಿಯನ್ನು ತೆರವುಗೊಳಿಸುವ ಕಾರ್ಯವು ಪ್ರಗತಿಯಲ್ಲಿದ್ದು, ಸ್ಥಗಿತಗೊಂಡಿರುವುದಿಲ್ಲ. |
| ಇ) | ಕಾಲುವೆ ಒತ್ತುವರಿ ಮಾಡಿದವರಲ್ಲಿ ಪ್ರಭಾವಿ ವ್ಯಕ್ತಿಗಳ ಹೆಸರು ಇರುವುದು ನಿಜವೆ; ಹಾಗಿದ್ದಲ್ಲಿ, ಯಾವುದೇ ಬಾಹ್ಯ ಒತ್ತಡಕ್ಕೆ ಮಣಿಯದೆ ಒತ್ತುವರಿಯನ್ನು ತೆರವುಗೊಳಿಸಲು ಕ್ರಮವಹಿಸಲಾಗುವುದೆ? | ಕಾಲುವೆ ಒತ್ತುವರಿ ಮಾಡಿದವರಲ್ಲಿ ಪ್ರಭಾವಿ ವ್ಯಕ್ತಿಗಳ ಹೆಸರುಗಳ ಕುರಿತು ಯಾವುದೇ ಪ್ರಕರಣಗಳು ಇರುವುದಿಲ್ಲ. ಭೂ ದಾಖಲೆಗಳ ಸಹಾಯಕ ನಿರ್ದೇಶಕರು ರವರ ಕಛೇರಿಯಿಂದ ಮೋಜಿಣಿದಾರರು ರಾಜ ಕಾಲುವೆಗಳ ಒತ್ತುವರಿಗಳನ್ನು ಗುರುತಿಸಿಕೊಟ್ಟ ನಂತರ ಸಂಬಂಧಪಟ್ಟ ತಹಸೀಲ್ದಾರ್ ರವರು ನೋಟೀಸ್ ಜಾರಿ ಮಾಡಿದ ನಂತರ ಯಾವುದೇ ಬಾಹ್ಯ ಒತ್ತಡಕ್ಕೆ ಮಣಿಯದೆ ಒತ್ತುವರಿಯನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ನಅಇ 971 ಎಂಎನ್‌ವೈ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ